# ಕನ್ನಡ ಪೋಸ್ಟ್

KANNADA POST

ಸಂಪಾದಕ : ಮಂಜು ಬನವಾಸೆ

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 153 | Pages. 2 | Date: 24-05-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 153 – ಪುಟಗಳು : 2 | 24-05-2026 | ಭಾನುವಾರ | Ph: 8762954248 | ದರ : ₹1


# ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ಮಾದರಿ ಕಾರ್ಯ

## ಸಕಲೇಶಪುರದಲ್ಲಿ 2054ನೇ ಮದ್ಯವರ್ಜನ ಶಿಬಿರ | ಶಾಸಕ ಸಿಮೆಂಟ್ ಮಂಜು ಅಭಿಮತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಮಾಜಮುಖಿ ಸೇವೆಗಳ ಮೂಲಕ ರಾಜ್ಯಕ್ಕೆ ಮಾದರಿಯಾಗಿದ್ದು, ಸರ್ಕಾರಕ್ಕೂ ಸಾಧ್ಯವಾಗದ ಅನೇಕ ಜನಪರ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಮಾಡುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ತೇರಾಪಂಥ್ ಭವನದಲ್ಲಿ ಶನಿವಾರ ಆಯೋಜಿಸಿದ್ದ 2054ನೇ ಮದ್ಯವರ್ಜನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಧರ್ಮದ ತಳಹದಿಯೊಂದಿಗೆ ಆಧುನಿಕ ತಂತ್ರಜ್ಞಾನವನ್ನು ಸಮನ್ವಯಗೊಳಿಸಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಫಲಾನುಭವಿಗಳ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿರುವುದು ಶ್ಲಾಘನೀಯ ಎಂದರು.

ರಾಜ್ಯದ ಬಡವರು, ನಿರ್ಗತಿಕರು ಹಾಗೂ ದುರ್ಬಲ ವರ್ಗದ ಜನರಿಗೆ ನೆರವು ನೀಡಿ ಸ್ವಾವಲಂಬಿ ಬದುಕು ಕಟ್ಟಿಕೊಡುವ ಕೆಲಸವನ್ನು ಸಂಸ್ಥೆ ನಿರಂತರವಾಗಿ ಮಾಡುತ್ತಿದೆ ಎಂದರು.

ಮದ್ಯವರ್ಜನ ಶಿಬಿರಾರ್ಥಿಗಳಿಗೆ ಕಿವಿಮಾತು ಹೇಳಿದ ಶಾಸಕರು, ಮದ್ಯಪಾನ ತ್ಯಜಿಸಿ ನವಜೀವನಕ್ಕೆ ಕಾಲಿಟ್ಟವರು



ಸಮಾಜದಲ್ಲಿ ಗೌರವಯುತ ಬದುಕು ಸಾಗಿಸಬೇಕು. ಶಿಬಿರ ಮುಗಿಸಿ ಹೋದ ಬಳಿಕ ಪುನಃ ಮದ್ಯದ ಚಟಕ್ಕೆ ಒಳಗಾಗದೇ ಕುಟುಂಬದ ಆಧಾರಸ್ತಂಭಗಳಾಗಿ ಸತ್ಪ್ರಜೆಗಳಾಗಿ ಬದುಕಬೇಕು ಎಂದು ಸಲಹೆ ನೀಡಿದರು.

ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ರಾಜ್ಯ ಸಂಘಟನಾ ಅಧ್ಯಕ್ಷ ನಟರಾಜ್ ಬಾದಾಮಿ ಮಾತನಾಡಿ, ಮದ್ಯಪಾನವು ಮಹಾಪಾಪ ಮಾತ್ರವಲ್ಲ, ಕುಟುಂಬ ಮತ್ತು ಸಮಾಜವನ್ನು ಹಾಳು ಮಾಡುವ ಶಾಪವಾಗಿದೆ ಎಂದರು.

ಮದ್ಯ ವ್ಯಸನವು ಸಂಬಂಧ, ಆರೋಗ್ಯ ಹಾಗೂ ವ್ಯಕ್ತಿಯ ಮಾನಮರ್ಯಾದೆಯನ್ನು ನಾಶಮಾಡುತ್ತದೆ. ಜೀವನದಲ್ಲಿ ದೊರೆತಿರುವ ಬದಲಾವಣೆಯ ಅವಕಾಶವನ್ನು ಶಿಬಿರಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ರಾಜ್ಯದಾದ್ಯಂತ ಮದ್ಯವರ್ಜನ ಶಿಬಿರ ಆಯೋಜಿಸಲಾಗುತ್ತಿದ್ದು, ಇದುವರೆಗೆ ಒಂದು ಲಕ್ಷಕ್ಕೂ ಹೆಚ್ಚು ಮಂದಿ ಮದ್ಯ ವ್ಯಸನದಿಂದ ಮುಕ್ತರಾಗಿ ಹೊಸ ಬದುಕಿನತ್ತ ಹೆಜ್ಜೆ ಇಟ್ಟಿದ್ದಾರೆ ಎಂದು ತಿಳಿಸಿದರು.

ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್, ಮದ್ಯವರ್ಜನ ಶಿಬಿರದ ವ್ಯವಸ್ಥಾಪನ ಸಮಿತಿ ಅಧ್ಯಕ್ಷೆ ರೇಖಾ ಸುರೇಶ್, ಕಾಂಗ್ರೆಸ್ ತಾಲೂಕು ಅಧ್ಯಕ್ಷ ಬೈರಮುಡಿ ಚಂದ್ರು, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷ ನವೀನ್ ಚಂದ್ರಶೆಟ್ಟಿ, ಸದಸ್ಯರಾದ ಗಿರೀಶ್, ಉಮಾನಾಥ್ ಸುವರ್ಣ, ಯೋಜನಾಧಿಕಾರಿ ರಾಜೇಶ್, ಮೇಲ್ವಿಚಾರಕ ಚಿರಂತ್ ಇತರರಿದ್ದರು.

### ಭಕ್ತರ ನಂಬಿಕೆಗೆ ಧಕ್ಕೆ ತರುವ ಯತ್ನ

**ಮಹತ್ತರ ಸೇವಾ ಕಾರ್ಯಗಳ ನಡುವೆಯೂ ಶ್ರೀಕ್ಷೇತ್ರ ಧರ್ಮಸ್ಥಳ ಹಾಗೂ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಕೆಲವು ಗುಂಪುಗಳು ನಡೆಸುತ್ತಿರುವ ಅಪಪ್ರಚಾರ ಮತ್ತು ಸುಳ್ಳು ಆರೋಪಗಳು ಖಂಡನೀಯ ಎಂದು ಶಾಸಕ ಸಿಮೆಂಟ್ ಮಂಜು ಆಕ್ರೋಶ ವ್ಯಕ್ತಪಡಿಸಿದರು.**

**ಸುಳ್ಳು ಸುದ್ದಿಗಳ ಮೂಲಕ ಭಕ್ತರ ಧಾರ್ಮಿಕ ನಂಬಿಕೆಗಳಿಗೆ ಧಕ್ಕೆ ತರುವ ಪ್ರಯತ್ನಗಳು ನಡೆಯುತ್ತಿವೆ. ಆದರೆ ಇಂತಹ ಅಪಪ್ರಚಾರಗಳು ಎಂದಿಗೂ ಯಶಸ್ವಿಯಾಗುವುದಿಲ್ಲ ಎಂದು ಹೇಳಿದರು.**

# ಆಲೂರಿನಲ್ಲಿ ಮುಗಿಯದ ಅಡುಗೆ ಅನಿಲ ಗೋಳು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ತಾಲ್ಲೂಕಿನಲ್ಲಿ ಸಮರ್ಪಕ ಅಡುಗೆ ಅನಿಲ ಪೂರೈಕೆಯಾಗದೆ ಶನಿವಾರವೂ ಪಟ್ಟಣದ ಭಾರತ್ ಗ್ಯಾಸ್ ಏಜೆನ್ಸಿ ಎದುರು ನೂರಾರು ಜನರು ಸರದಿ ಸಾಲಿನಲ್ಲಿ ನಿಲ್ಲಬೇಕಾಯಿತು.

ಸಾರ್ವಜನಿಕರ ಆಕ್ರೋಶ ಮಿತಿ ಮೀರುತ್ತಿದ್ದಂತೆ ಸ್ಥಳಕ್ಕಾಗಮಿಸಿದ ಶಾಸಕ ಸಿಮೆಂಟ್ ಮಂಜು ಪರಿಸ್ಥಿತಿ ತಿಳಿಗೊಳಿಸಿದರು. ನಾವು ಬುಕ್ ಮಾಡಿದ ಸಿಲಿಂಡರ್ ಬೇರೆ ಯಾರಿಗೋ ಪೂರೈಕೆಯಾಗಿದೆ. ಒಟಿಪಿ ಇಲ್ಲದೆಯೇ ಸಿಲಿಂಡರ್ ಪಡೆಯುವ ದಾರಿಯನ್ನು ಏಜೆನ್ಸಿಯವರು ಕಂಡುಕೊಂಡಿದ್ದಾರೆ. ಹೀಗಾಗಿ ಗ್ರಾಹಕರಿಗೆ ಅನ್ಯಾಯವಾಗುತ್ತಿದೆ ಎಂಬ ಆಕ್ರೋಶ ಕೇಳಿಬಂತು. ಸಾಕಷ್ಟು ಹರಸಾಹಸಪಟ್ಟು ಸಿಲಿಂಡರ್ ಪಡೆದುಕೊಂಡು ಹೋಗುತ್ತಿದ್ದವರ ಸಂಭ್ರಮವೂ ಕಂಡುಬಂತು. ಇನ್ನು ಕೆಲವರು ಏಜೆನ್ಸಿ ವಿರುದ್ಧ ಧಿಕ್ಕಾರ ಕೂಗುತ್ತಾ ಗೊಂದಲದ ವಾತಾವರಣ ಸೃಷ್ಟಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಸಿಮೆಂಟ್ ಮಂಜು, ಗ್ರಾಹಕರು ಸಿಲಿಂಡರ್ ಬುಕ್ ಮಾಡಿದ 45 ದಿನದಲ್ಲಿ ತಪ್ಪದೇ ವಿತರಣೆ ಮಾಡಲಾಗುವುದು. ತಮ್ಮ ಸರದಿ ಬರುವವರೆಗೂ ಅನ್ಯತಾ ಕಚೇರಿ ಬಳಿ ಹೋಗಿ ಸಮಯ ವ್ಯರ್ಥ ಮಾಡಿಕೊಳ್ಳಬಾರದು. ಈ ಹಿಂದೆ ಇದ್ದಂತೆ ತಕ್ಷಣ ಎಲ್‌ಪಿಜಿ ದೊರಕುವುದಿಲ್ಲ. ತಮ್ಮ ಬೇಡಿಕೆಗೆ ಅನುಗುಣವಾಗಿ ನಿಯಮಾನುಸಾರ ಗ್ಯಾಸ್ ಸಿಲಿಂಡರ್ ವಿತರಣೆ ಮಾಡಲಾಗುವುದು ಎಂದರು.

ಪಾಶ್ಚಿಮಾತ್ಯ ದೇಶದಲ್ಲಿ ಯುದ್ಧ ಪ್ರಾರಂಭವಾದ ನಂತರ ಗ್ಯಾಸ್ ವಿತರಣೆಯಲ್ಲಿ ವ್ಯತ್ಯಾಸವಾಗಿರುವುದು ನಿಜ. ಯುದ್ಧ ಪ್ರಾರಂಭವಾಗುವ ಮೊದಲು ಸಕಾಲಕ್ಕೆ ಗ್ಯಾಸ್ ದೊರಕುತ್ತಿತ್ತು. ಈಗ ಸಿಲಿಂಡರ್ ಪ್ರಮಾಣ ಕಡಿಮೆ ಬರುತ್ತಿರುವುದರಿಂದ ಬುಕ್ ಮಾಡಿದ 45 ದಿನಗಳಲ್ಲಿ ಸಿಲಿಂಡರ್ ವಿತರಣೆ ಮಾಡಲಾಗುವುದು. ಏಜೆನ್ಸಿ ಕಚೇರಿಯಲ್ಲಿ ಪ್ರತಿದಿನ ಸಿಲಿಂಡರ್ ಪಡೆಯುವವರ ಹೆಸರು, ಮೊಬೈಲ್ ಸಂಖ್ಯೆ ನಮೂದಿಸಿದ ಪಟ್ಟಿ ಪ್ರದರ್ಶಿಸಬೇಕು. ಈವರೆಗೆ ಆಗಿರುವ ಲೋಪವನ್ನು ಸರಿಪಡಿಸಿಕೊಂಡು ನಿಯಮಾನುಸಾರ ಸಿಲಿಂಡರ್‌ಗಳನ್ನು ವಿತರಣೆ ಮಾಡಬೇಕು. ಭವಿಷ್ಯದಲ್ಲಿ ಸಮಸ್ಯೆ ಎದುರಾಗದಂತೆ ಕ್ರಮ ವಹಿಸಬೇಕು. ಸಮಸ್ಯೆ ಬಗೆಹರಿದ ನಂತರ ಮನೆ ಬಳಿಗೆ ಸಿಲಿಂಡರ್ ವಿತರಿಸಲಾಗುವುದು ಎಂದು ಸೂಚಿಸಿದರು.

# 17 ಲಕ್ಷ ರೂ. ವೆಚ್ಚದಲ್ಲಿ ಬಸ್ ತಂಗುದಾಣ: ಭೂಮಿಪೂಜೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪ್ರಯಾಣಿಕರು ಬಿಸಿಲು ಹಾಗೂ ಮಳೆಗಾಲದಲ್ಲಿ ಆಶ್ರಯ ಪಡೆಯಲು ಬಸ್ ತಂಗುದಾಣ ನಿರ್ಮಿಸಲಾಗುತ್ತಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು. ಪಟ್ಟಣದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದಲ್ಲಿ ಶಾಸಕರ ಅನುದಾನದಡಿ 17 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸುತ್ತಿರುವ ಬಸ್ ತಂಗುದಾಣದ ಭೂಮಿಪೂಜೆ ನೆರವೇರಿಸಿ ಶನಿವಾರ ಮಾತನಾಡಿ, ಹಾಸನ, ಚಿಕ್ಕಮಗಳೂರು, ಮಂಗಳೂರು ಮತ್ತು ಗ್ರಾಮಾಂತರ ಭಾಗಕ್ಕೆ ನಿತ್ಯ ತೆರಳುವ ಸಾವಿರಾರು ಪ್ರಯಾಣಿಕರು ಇಲ್ಲಿ ತಂಗುದಾಣವಿಲ್ಲದೆ ಮಳೆ, ಬಿಸಿಲಿನಲ್ಲಿ ನಿಲ್ಲಬೇಕಾಗಿದೆ. ಬೇಸಿಗೆ ಹಾಗೂ ಮಳೆಗಾಲದಲ್ಲಿ ಪ್ರಯಾಣಿಕರು ಹಗಲು ವೇಳೆ ಬಿಸಿಲಿನ ಬೇಗೆ ತಾಳಲಾರದೆ ಸಮೀಪದ ಮರಗಳ ಬಳಿ ನಿಲ್ಲುವಂತಾಗಿದೆ. ಮಳೆ ಬಂದರೂ ಇದೇ ಸಮೀಪದ ಪೊಲೀಸ್ ಚೌಕಿಯ ಬಳಿ ನಿಲ್ಲುವ ಸ್ಥಿತಿ ಪ್ರಯಾಣಿಕರದ್ದಾಗಿದೆಯೆಂದು ತಿಳಿಸಿದರು.

ಈಗಾಗಲೇ ಬಿಸಿಲಿನ ಪ್ರಖರತೆ ಹೆಚ್ಚಾಗಿದ್ದು ಬಸ್‌ಗಾಗಿ ಇಲ್ಲಿ ಕಾದು ನಿಲ್ಲುವುದು ಅಸಾಧ್ಯ. ಹಾಗಾಗಿ ಪ್ರಯಾಣಿಕರು ನೆರಳಿನಲ್ಲಿ ಆಶ್ರಯ ಪಡೆಯಬೇಕಿದ್ದು, ಸಾರ್ವಜನಿಕರು ಹಲವಾರು ಬಾರಿ ಮನವಿ ಮಾಡಿದ್ದರಿಂದ ಪ್ರಯಾಣಿಕರ ಅನುಕೂಲಕ್ಕಾಗಿ ಸುಸಜ್ಜಿತ ತಂಗುದಾಣ ನಿರ್ಮಿಸಲಾಗುತ್ತದೆಂದರು. ತಾಲ್ಲೂಕಿನ ದಿಡಗ ಬಸ್ ನಿಲ್ದಾಣದ ಅಭಿವೃದ್ಧಿ ಕಾಮಗಾರಿಗೆ 20 ಲಕ್ಷ ರೂ. ಅನುದಾನ ನೀಡಿದ್ದು, ಚನ್ನರಾಯಪಟ್ಟಣ ಘಟಕ ಅಭಿವೃದ್ಧಿ ಕಾಮಗಾರಿಗೆ ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಅವರಿಗೆ 1 ಕೋಟಿ ರೂ. ಅನುದಾನಕ್ಕೆ ಮನವಿ ಸಲ್ಲಿಸಿದ್ದು, ಪ್ರಸಕ್ತ ವರ್ಷದಲ್ಲಿ ಅನುದಾನ ಲಭ್ಯತೆ ಆಧಾರದ ಮೇಲೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುವುದು. ಚನ್ನರಾಯಪಟ್ಟಣ ಬಸ್ ನಿಲ್ದಾಣ ಎಲ್ಲಾ ಜಿಲ್ಲೆಗಳಿಗೂ ಸಂಪರ್ಕ ಬಿಂದುವಾಗಿದ್ದು ಪ್ರತಿನಿತ್ಯ 2,000ಕ್ಕಿಂತಲೂ ಅಧಿಕ ಬಸ್ ನಿಲ್ದಾಣಕ್ಕೆ ಆಗಮನ ನಿರ್ಗಮನವಿದ್ದು ಪ್ರಯಾಣಿಕರ ಅನುಕೂಲಕ್ಕಾಗಿ ಸಿಸಿಟಿವಿ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಹೈಮಾಸ್ಟ್ ಅಳವಡಿಸಲಾಗಿದ್ದು, ಪ್ರಯಾಣಿಕರ ಅನುಕೂಲಕ್ಕಾಗಿ ಬೇಕಾಗಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದ್ದು ಸಂಸ್ಥೆಯವರು ಸೂಕ್ತ ನಿರ್ವಹಣೆ ಮಾಡಬೇಕೆಂದು ಸೂಚಿಸಿದರು.

# ಕೆರೆಗಳ ಪುನಶ್ಚೇತನ ಕಾಮಗಾರಿಗೆ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಅಂತರ್ಜಲ ಮಟ್ಟ ಹೆಚ್ಚಿಸಿ ರೈತರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಕೆರೆಗಳ ಅಭಿವೃದ್ಧಿ ಹಾಗೂ ಅಗತ್ಯ ನೀರಾವರಿ ಯೋಜನೆಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಶನಿವಾರ ಸಕಲೇಶಪುರ ತಾಲೂಕಿನ ದೊಡ್ಡನಾಗರ ಹಾಗೂ ಆಲೂರು ತಾಲೂಕಿನ ಗಂಗರ ಗ್ರಾಮದ ಕೆರೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಕೆರೆಗಳು ಗ್ರಾಮೀಣ ರೈತರ ಜೀವನಾಡಿಯಾಗಿದ್ದು, ಅವುಗಳ ಸಂರಕ್ಷಣೆ ಮತ್ತು ಅಭಿವೃದ್ಧಿಯಿಂದಲೇ ಕೃಷಿ ಬದುಕು ಹಸನಾಗಲು ಸಾಧ್ಯವಾಗುತ್ತದೆ. ಕ್ಷೇತ್ರದ ಅನೇಕ ಭಾಗಗಳಲ್ಲಿ ರೈತರು ಇನ್ನೂ ಮಳೆಯಾಧಾರಿತ ಕೃಷಿಯನ್ನೇ ನಂಬಿಕೊಂಡು ಸಂಕಷ್ಟ ಅನುಭವಿಸುತ್ತಿದ್ದಾರೆ. ಸಾವಿರಾರು ಎಕರೆ ಪ್ರದೇಶದಲ್ಲಿ ಕೆರೆಗಳಿದ್ದರೂ ಅವುಗಳ ಸಮರ್ಪಕ ಅಭಿವೃದ್ಧಿ ಆಗದ ಕಾರಣ ಮಳೆ ಕೊರತೆಯಾದಾಗ ಬರ ಪರಿಸ್ಥಿತಿ ಎದುರಾಗುತ್ತಿದೆ ಎಂದು ಹೇಳಿದರು.

ಹಿರಿಯರ ಕಾಲದಲ್ಲಿ ಕೆರೆಗಳೇ ಜೀವಜಲದ ಮೂಲವಾಗಿದ್ದು, ಅವುಗಳ ನೆರವಿನಿಂದ ವರ್ಷಕ್ಕೆ ಮೂರು ಬೆಳೆ ಭತ್ತ ಸೇರಿದಂತೆ ವಿವಿಧ ಉಪಕೃಷಿಗಳನ್ನು ನಡೆಸಲಾಗುತ್ತಿತ್ತು.

ಇದೀಗ ಹಲವಾರು ಕೆರೆಗಳು ಹೂಳು ತುಂಬಿಕೊಂಡು, ಒತ್ತುವರಿಗೆ ಒಳಗಾಗಿ ನೀರು ನಿಲ್ಲದ ಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಜಲಮರುಪೂರಣಕ್ಕೂ ಹಿನ್ನಡೆಯಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ದೊಡ್ಡನಾಗರ ಗ್ರಾಮದ ತುಬಿನ ಕೆರೆ ಹಾಗೂ ಗಂಗರ ಗ್ರಾಮದ ದೊಡ್ಡ ಕೆರೆ ಅಭಿವೃದ್ಧಿಗೆ ತಲಾ ₹50 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ. ಕಾಮಗಾರಿಗಳಡಿ ಕೆರೆ ಹೂಳೆತ್ತುವುದು, ಏರಿ ಮೇಲಿನ ಗಿಡಗಂಟೆ ತೆರವು, ತೂಬುಗಳ ದುರಸ್ತಿ ಹಾಗೂ ನೀರು ಸಂಗ್ರಹ ಸಾಮರ್ಥ್ಯ ಹೆಚ್ಚಿಸುವ ಕೆಲಸ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಕೆರೆಗಳ ಅಭಿವೃದ್ಧಿಯಿಂದ ರೈತರ ನೀರಾವರಿ ಕೃಷಿಗೆ ಉತ್ತೇಜನ ಸಿಗುವುದರ ಜೊತೆಗೆ ಅಂತರ್ಜಲ ಮಟ್ಟವೂ ಹೆಚ್ಚಲಿದೆ. ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯೂ ನಿವಾರಣೆಯಾಗಲಿದೆ ಎಂದು ಹೇಳಿದರು.

# ಹೊಸ ಮನೆಗೆ ಅಳವಡಿಸಿದ್ದ ವೈರ್ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಬಿಜಿಎಸ್ ಲೇಔಟ್‌ನಲ್ಲಿ ಹೊಸ ಮನೆಗೆ ಅಳವಡಿಸಿದ್ದ 2 ಲಕ್ಷ ರೂ. ಬೆಲೆಯ ಎಲೆಕ್ಟ್ರಿಕಲ್ ಕಾಪರ್ ವೈರ್ ಕಳವು ಮಾಡಲಾಗಿದೆ.

ದುದ್ದ ಹೋಬಳಿ ಜಿ.ಮೈಲನಹಳ್ಳಿ ಗ್ರಾಮದ ಎಂ.ಆರ್.ಲಿಂಗರಾಜು ಎಂಬುವವರ ಮನೆಯಲ್ಲಿ ಕಳ್ಳತನ ನಡೆದಿದೆ. ಬುಸ್ತೇನಹಳ್ಳಿ ಬೈಪಾಸ್ ಹತ್ತಿರ ಲೇಔಟ್‌ನಲ್ಲಿ ಮನೆ ನಿರ್ಮಿಸಲಾಗುತ್ತಿದೆ. ಮೇ 19ರಂದು ಎಲ್ಲಾ ಕೋಣೆಗಳಿಗೆ ಎಲೆಕ್ಟ್ರಿಕಲ್ ವೈರ್ ಅಳವಡಿಸಿ ಸಂಜೆ ಬೀಗ ಹಾಕಿಕೊಂಡು ತೆರಳಿದ್ದರು. ಮಾರನೇ ದಿನ ಬಂದು ನೋಡಿದಾಗ ವೈರ್ ಕಳುವಾಗಿರುವುದು ಗೊತ್ತಾಗಿದೆ. ಮನೆಯ ಮೇಲಿಂದ ಕೆಳಗಿಳಿದು ಬಂದಿರುವ ಕಳ್ಳರು ವೈರ್ ಅನ್ನು ಕತ್ತರಿಸಿಕೊಂಡು ಹೋಗಿದ್ದಾರೆ. ದುದ್ದ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮೊಬೈಲ್ ಬಳಕೆ ಮಿತಿ ಮೀರಿದರೆ ಅಪಾಯ ಕಟ್ಟಿಟ್ಟ ಬುತ್ತಿ: ಬಾಲಕೃಷ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಮೊಬೈಲ್ ಲಾಭಕ್ಕಿಂತ ನಷ್ಟವನ್ನೇ ಹೆಚ್ಚಾಗಿ ಕರುಣಿಸುತ್ತಿದ್ದು ಬಳಸುವಾಗ ಎಚ್ಚರ ವಹಿಸದಿದ್ದರೆ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಆಯೋಜಿಸಿದ್ದ 2025–26ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ಸ್ಕೌಟ್ ಅಂಡ್ ಗೈಡ್ಸ್ ಹಾಗೂ ರೆಡ್ ಕ್ರಾಸ್ ಮತ್ತು ರೆಡ್ ರಿಬ್ಬನ್ ಕಾರ್ಯಕ್ರಮಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿ, ಸಾಮಾಜಿಕ ಜಾಲತಾಣಗಳ ಅಪರಿಚಿತ ಆ್ಯಪ್‌ಗಳನ್ನು ನಂಬಿ ಜಿಲ್ಲೆಯ ಏಳೂವರೆ ಸಾವಿರ ಜನರು ಸುಮಾರು 150 ಕೋಟಿ ರೂ. ಕಳೆದುಕೊಂಡಿದ್ದು, ಮೊಬೈಲ್ ಬಳಸುವಾಗ ಜಾಗರೂಕರಾಗಿರಬೇಕೆಂದು ಸಲಹೆ ನೀಡಿದರು.

ಬ್ಯಾಂಕ್ ಖಾತೆ ಹೊಂದಿರುವ ಮೊಬೈಲ್ ಬಳಕೆದಾರರು ಸಾಕಷ್ಟು ಎಚ್ಚರಿಕೆ ವಹಿಸಬೇಕಿದೆ. ಇತ್ತೀಚಿನ ದಿನಗಳಲ್ಲಿ ಅಪರಿಚಿತರು ಅಪಾಯಕಾರಿ ಆ್ಯಪ್‌ಗಳ ಲಿಂಕ್ ಕಳಿಸುವುದು ಇಲ್ಲವೇ ಕರೆ ಮಾಡಿ ಒಟಿಪಿ ಕೇಳಿ ಆನ್‌ಲೈನ್ ಮೂಲಕ ನಿಮ್ಮ ಬ್ಯಾಂಕ್ ಖಾತೆಗಳಿಗೆ ಕನ್ನ ಹಾಕುವ ಪ್ರಕರಣಗಳು ಹೆಚ್ಚಾಗುತ್ತಿವೆ ಎಂದರು.

ಇತ್ತೀಚಿನ ಶೈಕ್ಷಣಿಕ ವ್ಯವಸ್ಥೆಯಲ್ಲಿ ಮೊಬೈಲ್ ಬಳಕೆ ಅಗತ್ಯವಿದೆ. ಆದರೆ ದುರ್ಬಳಕೆ ಮಾಡಬಾರದು. ಮೊಬೈಲ್‌ನಲ್ಲಿ ವಿಶ್ವದ ಎಲ್ಲಾ ಮಾಹಿತಿಯು ಲಭ್ಯವಾಗಲಿದೆ. ಉಪಯುಕ್ತ ಮಾಹಿತಿಯನ್ನು ಮಾತ್ರ ಪಡೆದರೆ ಬದುಕು ಸುಂದರವಾಗಲಿದೆ.

ದುರ್ಬಳಕೆ ಮಾಡಿಕೊಂಡರೆ ಭವಿಷ್ಯವೂ ನಿಂತ ನೀರಾಗಲಿದೆ ಎಂದು ವಿದ್ಯಾರ್ಥಿಗಳಿಗೆ ಎಚ್ಚರಿಸಿದರು.

ಕ್ರೀಡೆ ಎಂಬುದು ಆರೋಗ್ಯದ ಮಂತ್ರ. ಕ್ರೀಡೆಗಳಲ್ಲಿ ಸಕ್ರಿಯವಾಗಿ ತೊಡಗುವುದರಿಂದ ದೈಹಿಕ ಹಾಗು ಮಾನಸಿಕ ಆರೋಗ್ಯವು ವೃದ್ಧಿಯಾಗಲಿದೆ. ದಿನದಲ್ಲಿ ಒಂದಷ್ಟು ಸಮಯ ಬಿಡುವಿನ ವೇಳೆಯಲ್ಲಿ ದಿನ ಪತ್ರಿಕೆ ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಅದರಿಂದ ವಿಶ್ವದ ಎಲ್ಲಾ ಮಾಹಿತಿ ಲಭ್ಯವಾಗಲಿದೆ. ದಿನ ಪತ್ರಿಕೆಗಳನ್ನು ಓದುವುದರಿಂದ ಸಾಮಾನ್ಯ ಜ್ಞಾನವು ವೃದ್ಧಿಯಾಗಲಿದ್ದು ಬದುಕಿನ ಸಾಕಷ್ಟು ತಿರುವುಗಳಿಗೆ ದಾರಿ ದೀಪವಾಗಲಿದೆ ಎಂದು ಸಲಹೆ ನೀಡಿದರು.

ಈ ವರ್ಷದ ಬೇಸಿಗೆಯ ಪ್ರಾರಂಭದಿಂದಲೂ ಬಿಸಿಲಿನ ತಾಪಮಾನ ಹೆಚ್ಚಾಗಿರುವುದು ಅಪಾಯಕಾರಿ ಬೆಳವಣಿಗೆಯಾಗಿದೆ. ಪರಿಸರ ಸಂರಕ್ಷಣೆಯೇ ಪ್ರಕೃತಿಯ ಸಮತೋಲನದ ಮೂಲ ಮಂತ್ರ. ಮರ-ಗಿಡಗಳನ್ನು ಬೆಳೆಸಿದ್ದಲ್ಲಿ ಮಾತ್ರ ಭೂಮಿಯ ಮೇಲೆ ಸಕಲ ಜೀವ ರಾಶಿಗಳು ಬದುಕುಳಿಯಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಕಾಲೇಜು ಶಿಕ್ಷಣ ಇಲಾಖೆಯ ಮೈಸೂರು ವಿಭಾಗದ ಪ್ರಾದೇಶಿಕ ಜಂಟಿ ನಿರ್ದೇಶಕಿ ಡಾ.ಡಿ.ಎಸ್.ಪ್ರತಿಮಾ ಮಾತನಾಡಿ, ದೇಶಕ್ಕೆ ಉತ್ತಮ ಪ್ರಧಾನಿಯಾಗಿ ಹೆಚ್.ಡಿ.ದೇವೇಗೌಡರು, ಸಾಹಿತ್ಯ ಕ್ಷೇತ್ರಕ್ಕೆ ಎಸ್.ಎಲ್.ಭೈರಪ್ಪ ಅವರನ್ನು ಸೇರಿದಂತೆ, ಕ್ರೀಡೆ, ಆರೋಗ್ಯ, ಸಾಹಿತ್ಯ, ರಾಜಕೀಯ ಹಾಗೂ ವಿವಿಧ ಕ್ಷೇತ್ರಗಳಿಗೆ ಸಾಧಕರನ್ನು ಕೊಡುಗೆಯಾಗಿ ನೀಡಿದ ಜಿಲ್ಲೆ ಹಾಸನ ಎಂದು ಬಣ್ಣಿಸಿದರು.

ಶಿಕ್ಷಣ ಸುಲಭದ ತುತ್ತಲ್ಲ. ಶ್ರದ್ಧೆ ಹಾಗೂ ಶಿಸ್ತಿನಿಂದ ವಿದ್ಯೆಯನ್ನು ದೀಕ್ಷೆ ಪಡೆದು ಓದಿದ್ದಲ್ಲಿ ಶೈಕ್ಷಣಿಕ ಬದುಕನ್ನು ಸುಂದರವಾಗಿ ರೂಪಿಸಿಕೊಳ್ಳುವುದರ ಜೊತೆಗೆ ಸಮಾಜಕ್ಕೆ ಮಾದರಿಯಾಗಿ ಹೆಸರು ಹಾಗೂ ಕೀರ್ತಿ ತರಬಹುದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪ್ರಾಂಶುಪಾಲ ಬಿ.ಹೆಚ್.ಲಕ್ಷ್ಮಣಗೌಡ ಮಾತನಾಡಿ, ಕ್ರೀಡೆಯಿಂದ ಆರೋಗ್ಯ ವೃದ್ಧಿಯಾಗಲಿದ್ದು ನಾಯಕತ್ವದ ಗುಣ ಬೆಳೆಯಲಿದೆ. ಕೇವಲ ಪದವಿಗೆ ಶಿಕ್ಷಣ ಅಂತ್ಯಗೊಳಿಸಬೇಡಿ. ಮುಂದುವರಿಸಿ ಉದ್ಯೋಗ ಅವಕಾಶ ಗಿಟ್ಟಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಚನ್ನರಾಯಪಟ್ಟಣ ತಾಲ್ಲೂಕು ನ್ಯಾಯಾಂಗ ನೌಕರರ ನಿರ್ದೇಶಕ ಕೆ.ಎಂ.ಸೋಮಶೇಖರ್, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಎನ್.ಆರ್.ಮರುಳಾರಾಧ್ಯ, ಉಪನ್ಯಾಸಕರಾದ ಕೆ.ಅನಂತ್, ಗೋಪಾಲಕೃಷ್ಣ, ಸಹ ಪ್ರಾಧ್ಯಾಪಕರಾದ ಹೆಚ್.ಜೆ.ಹರೀಶ್, ಎ.ಕೆ.ಕುಮಾರ್, ಡಾ.ಎಂ.ಕೆ.ಮಂಜುನಾಥ್, ಎನ್.ಆರ್.ಆಶಾ, ದೈಹಿಕ ಶಿಕ್ಷಣ ನಿರ್ದೇಶಕ ಡಿ.ಎನ್.ಮನು, ಗ್ರಂಥಪಾಲಕಿ ಬಿ.ಸುನಂದ ಇತರರಿದ್ದರು.

# ಉಮೇಶ್ ದಿಡಗ ಕೃಷಿ ಪತ್ತಿನ ಸಂಘದ ಉಪಾಧ್ಯಕ್ಷ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ತಾಲ್ಲೂಕಿನ ದಿಡಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ಸ್ಥಾನರಾಗಿ ಉಳ್ಳಾವಳ್ಳಿ ಗ್ರಾಮದ ಹೆಚ್.ಎಸ್.ಮಹೇಶ್ ಅವಿರೋಧ ಆಯ್ಕೆಯಾದರು.

ಇತ್ತೀಚೆಗೆ ತೆರವಾಗಿದ್ದ ಸ್ಥಾನಕ್ಕೆ ಚುನಾವಣಾ ಪ್ರಕ್ರಿಯೆ ಜರುಗಿತು. ಹೆಚ್.ಎಸ್.ಮಹೇಶ್ ಹೊರತುಪಡಿಸಿ ಮತ್ಯಾರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆ ಘೋಷಿಸಲಾಯಿತು. ನೂತನ ಉಪಾಧ್ಯಕ್ಷ ಹೆಚ್.ಎಸ್. ಮಹೇಶ್ ಮಾತನಾಡಿ, ಕಿರಿಯ ಕಾರ್ಯಕರ್ತರನ್ನು ಗುರುತಿಸಿ ಸ್ಥಾನಮಾನಗಳನ್ನು ನೀಡಿ ರಾಜಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಿರುವ ಹೆಗ್ಗಳಿಕೆಯು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗೆ ಸಲ್ಲುತ್ತದೆ ಎಂದರು.

ಕೇವಲ 10 ಗುಂಟೆ ಜಮೀನು ಹೊಂದಿರುವ ರೈತನಿಗೂ ಸಹ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡುವ ಮೂಲಕ ರೈತ ವರ್ಗವನ್ನು ಮೇಲೆತ್ತುವ ಕಾರ್ಯದಲ್ಲಿ ಶ್ರಮಿಸುತ್ತಿರುವ ಕ್ಷೇತ್ರದ ಶಾಸಕ ಸಿ.ಎನ್.ಬಾಲಕೃಷ್ಣ ಅವರ ಕಾರ್ಯವೈಖರಿಯು ಶ್ಲಾಘನೀಯ ಎಂದರು.

ಸುಮಾರು 25 ವರ್ಷಗಳಿಂದ ತಾಲ್ಲೂಕು ವ್ಯಾಪ್ತಿಯಲ್ಲಿ ವಾಡಿಕೆಯಂತೆ ಮಳೆಯಾಗದ ಕಾರಣ ಕೆರೆ-ಕಟ್ಟೆಗಳು ನೀರಿಲ್ಲದೆ ಒಣಗುತ್ತಿವೆ. ಅಂತರ್ಜಲ ಮಟ್ಟ ಕುಸಿದಿದ್ದು ರೈತರ ಬದುಕು ಚಿಂತಾಜನಕವಾಗಿತ್ತು. ಆದರೆ ಶಾಸಕ ಸಿ.ಎನ್.ಬಾಲಕೃಷ್ಣ ಅವರು ಏತ ನೀರಾವರಿ ಯೋಜನೆಯಡಿ ಕಳೆದ 3–4 ವರ್ಷಗಳಿಂದ ತಾಲ್ಲೂಕು ವ್ಯಾಪ್ತಿಯ ನೂರಾರು ಕೆರೆ-ಕಟ್ಟೆಗಳಿಗೆ ನೀರು ತುಂಬಿಸುತ್ತಿರುವ ಪರಿಣಾಮ ತಾಲ್ಲೂಕಿನ ರೈತರು ನೆಮ್ಮದಿಯಾಗಿದ್ದಾರೆ ಎಂದರು.

ಸಂಘವು 11 ನಿರ್ದೇಶಕರನ್ನು ಹೊಂದಿದೆ. ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದ ಹೆಚ್.ಎಸ್.ಮಹೇಶ್ ಅವರನ್ನು ಅಭಿನಂದಿಸಲಾಯಿತು. ಜೆಡಿಎಸ್ ಹಿರಿಯ ನಾಯಕರು ಹಾಗೂ ಕಾರ್ಯಕರ್ತರು ಅಭಿನಂದಿಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಪುಟ್ಟರಾಜು, ಎಂ.ಆರ್. ವಾಸು, ಎಪಿಎಂಸಿ ಮಾಜಿ ಅಧ್ಯಕ್ಷ ರಘುರಾಮ್, ಸಂಘದ ಅಧ್ಯಕ್ಷ ಹೆಚ್.ಕೆ.ಯೋಗೇಶ್, ಮಾಜಿ ಅಧ್ಯಕ್ಷ ತಾತೇಗೌಡ, ಮಾಜಿ ಉಪಾಧ್ಯಕ್ಷ ಕುಮಾರ್, ನಿರ್ದೇಶಕರಾದ ಮಧು, ಮಲ್ಲೇಗೌಡ, ವೆಂಕಟೇಶ್, ಬಾಲು, ತುಳಸಿ, ಪ್ರಮುಖರಾದ ಜೆ.ಎಸ್. ಮಂಜುನಾಥ್, ಜೆ.ಜೆ.ಧನಂಜಯ, ಜೆ.ಡಿ.ಮಂಜುನಾಥ್, ಸಂಘದ ಕಾರ್ಯನಿರ್ವಹಣಾಧಿಕಾರಿ ನಿಂಗಮ್ಮ ಹಾಗೂ ಇತರರಿದ್ದರು.

# 4.85 ಕೋಟಿ ರೂ. ವೆಚ್ಚದ ಕಾಮಗಾರಿಗೆ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲೂಕಿನ ವಿವಿಧ ಗ್ರಾಮಗಳಲ್ಲಿ 4.85 ಕೋಟಿ ರೂ. ವೆಚ್ಚದ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಎ.ಮಂಜು ಭೂಮಿಪೂಜೆ ನೆರವೇರಿಸಿದರು.

ತಾಲೂಕಿನ ಕೇರಳಾಪುರ ಬೂದನೂರು ಮುಖ್ಯ ರಸ್ತೆ ಎರಡು ಕೋಟಿ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ, 75 ಲಕ್ಷ ರೂ. ವೆಚ್ಚದಲ್ಲಿ ಕೇರಳಾಪುರ ಬಸ್ ನಿಲ್ದಾಣ, ಮೂಡನಹಳ್ಳಿ ಕ್ರಾಸ್ ಪಡುವಲಹಿಪ್ಪೆ 1 ಕೋಟಿ ರೂ. ವೆಚ್ಚದಲ್ಲಿ ಮುಖ್ಯ ರಸ್ತೆ ಕಾಮಗಾರಿ, ರಾಮನಾಥಪುರ ಹೋಬಳಿ ಆಂಜನೇಯಹೊಸಹಳ್ಳಿ ಲಿಂಗಾಪುರ ಡೈರಿ ಹತ್ತಿರ 15 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಹಾಗೂ ಎಪಿಎಂಸಿ ಆವರಣದಲ್ಲಿ ಒಂದು ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗೆ



ಶಾಸಕ ಎ.ಮಂಜು ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದ್ದರೂ ಕೂಡ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ಮೇರೆಗೆ ಅನುದಾನ ನೀಡಲಾಗುತ್ತಿದೆ. ಸರ್ಕಾರಕ್ಕೆ ಧನ್ಯವಾದಗಳನ್ನು ಜನತೆಯ ಪರವಾಗಿ ಅರ್ಪಿಸುತ್ತೇನೆ ಎಂದರು.

ಇಂದು ಚಾಲನೆ ನೀಡಿರುವ ಕೇರಳಾಪುರ ಬಸ್ ನಿಲ್ದಾಣದ ಕಾಮಗಾರಿ, ಕೇರಳಾಪುರ ಬೂದನೂರು ಮುಖ್ಯ ರಸ್ತೆ ಅಭಿವೃದ್ಧಿ ಕಾಮಗಾರಿ, ಮೂಡನಹಳ್ಳಿ ಕ್ರಾಸ್ ಪಡುವಲಹಿಪ್ಪೆ ರಸ್ತೆ ಅಭಿವೃದ್ಧಿ ಕಾಮಗಾರಿ ಹಾಗೂ ಎಪಿಎಂಸಿ ಆವರಣದಲ್ಲಿನ ಕಾಮಗಾರಿಗಳನ್ನು ಆರು ತಿಂಗಳ ಒಳಗಾಗಿ ಗುಣಮಟ್ಟದಿಂದ ಪೂರ್ಣಗೊಳಿಸುವುದಾಗಿ ಭರವಸೆ ನೀಡಿದರು.

ರೈತರು ತಮ್ಮ ಬೆಳೆಯನ್ನು ಯಾವುದೇ ದಲ್ಲಾಳಿಗಳ ಮಧ್ಯವರ್ತಿಗಳ ಹಾವಳಿಗೆ ತುತ್ತಾಗದಂತೆ ನೇರವಾಗಿ ಎಪಿಎಂಸಿ ಮೂಲಕ ಮಾರಾಟ ಮಾಡಲು ಎಲ್ಲಾ ಅನುಕೂಲ ಒದಗಿಸುವ ಉದ್ದೇಶದಿಂದ ಎಪಿಎಂಸಿ ಆವರಣದಲ್ಲಿ ಸುಸಜ್ಜಿತ ರಸ್ತೆ ನಿರ್ಮಾಣ ಮಾಡುತ್ತಿದ್ದು ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು. ಗುಣಮಟ್ಟದ ರಸ್ತೆ ನಿರ್ಮಿಸುವಂತೆ ಅಧಿಕಾರಿಗಳಿಗೆ ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಎಪಿಎಂಸಿ ಮುಂಭಾಗ ಲಾರಿಗಳನ್ನು ನಿಲ್ಲಿಸುವ ಉದ್ದೇಶದಿಂದ ಆರು ತಿಂಗಳ ಒಳಗಾಗಿ ಎರಡು ಕೋಟಿ ವೆಚ್ಚದಲ್ಲಿ ವ್ಯವಸ್ಥೆ ಕಲ್ಪಿಸುವುದಾಗಿ ಭರವಸೆ ನೀಡಿದರು.

ಎಇಇ ರಶ್ಮಿ, ಎಇ ರಮೇಶ್, ಮುಖಂಡರಾದ ಕರೀಗೌಡ, ಸಂತೋಷ್ ಗೌಡ, ಯೋಗೇಶ್, ಶಿವು, ನಾಗರಾಜ್, ನರಸೇಗೌಡ, ಕೃಷ್ಣೇಗೌಡ, ದಿವಾಕರ್, ಪುಟ್ಟರಾಜ, ಮರಡಿ ಉಪೇಂದ್ರ, ಗುತ್ತಿಗೆದಾರರು ಗ್ರಾಮದ ಎಲ್ಲಾ ಮುಖಂಡರು, ಹಿರಿಯರು ಉಪಸ್ಥಿತರಿದ್ದರು.

# ಹಾಸನ ರೈಲ್ವೆ ನಿಲ್ದಾಣದಲ್ಲಿ ಸ್ವಚ್ಛತಾ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಮ್ಮ ಮನೆಯಿಂದಲೇ ಸ್ವಚ್ಛತೆಯ ಕೆಲಸಗಳಾಗಬೇಕು. ಹಾಗಾದಾಗ ಮಾತ್ರ ಸುಂದರ ದೇಶ ಕಟ್ಟಲು ಸಾಧ್ಯವಾಗುತ್ತದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಹೇಳಿದರು.

ನಗರದ ರೈಲ್ವೆ ನಿಲ್ದಾಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ಮಹಾನಗರ ಪಾಲಿಕೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಹಾಗೂ ವಿವಿಧ ಸಂಘ-ಸಂಸ್ಥೆಗಳಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಸ್ವಚ್ಛತಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸ್ವಚ್ಛತಾ ಕಾರ್ಯಕ್ರಮಗಳು ಕೇವಲ ಒಂದು ದಿನಕ್ಕೆ ಸೀಮಿತವಾಗದೆ ಪ್ರತಿದಿನವೂ ಆಚರಣೆಯಲ್ಲಿರಬೇಕು. ನಾವು ವಾಸಿಸುವ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಂಡರೆ ಆರೋಗ್ಯವಾಗಿರಬಹುದು. ಅದರಿಂದ ಇತರರೂ ಪ್ರೇರಣೆ ಪಡೆದು ನೈರ್ಮಲ್ಯಕ್ಕೆ ಆದ್ಯತೆ ನೀಡುತ್ತಾರೆ. ಸ್ವಚ್ಛತೆ ಕಾಪಾಡಿಕೊಳ್ಳಬೇಕೆಂದು ಸಲಹೆ ನೀಡುವ ಅನಿವಾರ್ಯತೆ ಸೃಷ್ಟಿಯಾಗಿ



ರುವುದು ಬೇಸರದ ಸಂಗತಿ ಎಂದರು.

ಬಸ್, ರೈಲ್ವೆ ನಿಲ್ದಾಣ, ರಸ್ತೆ, ಸರ್ಕಾರಿ ಕಚೇರಿ ಎಲ್ಲಾ ಕಡೆ ನೈರ್ಮಲ್ಯ ಕಾಪಾಡಬೇಕು. ಸ್ವಚ್ಛತೆ ಎಲ್ಲರ ಜೀವನದ ಅವಿಭಾಜ್ಯ ಅಂಗವಾಗಬೇಕು. ಈ ನಿಟ್ಟಿನಲ್ಲಿ ನಾವು ಪೌರ ಕಾರ್ಮಿಕರನ್ನು ಪ್ರೇರಣೆಯಾಗಿ ಪಡೆಯಬೇಕು. ಯಾವುದೋ ರಸ್ತೆ, ಬೀದಿಯನ್ನು ಸ್ವಚ್ಛಗೊಳಿಸುವ ಅವರು ನಿಜವಾದ ದೇಶ ಸೇವಕರೆಂದು ಬಣ್ಣಿಸಿದರು.

ಪರಿಸರ ಅಧಿಕಾರಿ ಭಾಸ್ಕರ್, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಅಧಿಕಾರಿ ಮೀನಾಕ್ಷಮ್ಮ, ಕಲಾವಿದ ಬಿ.ಟಿ.ಮಾನವ, ಸ್ಕೌಟ್ಸ್ ಅಂಡ್ ಗೈಡ್ಸ್‌ನ ಆರ್.ಜಿ.ಗಿರೀಶ್ ಮತ್ತಿತರರಿದ್ದರು.

# ಸಾರ್ವಜನಿಕರ ಪರ ಹೋರಾಟಕ್ಕಾಗಿ ಭೀಮ್ ಆರ್ಮಿ ಕೆಲಸ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಭ್ರಷ್ಟಾಚಾರ ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಬಹುಜನ ಹಿತಾಯ-ಬಹುಜನ ಸುಖಾಯ ಸಿದ್ಧಾಂತದಡಿ ತಾಲೂಕಿನಲ್ಲಿ ಭೀಮ್ ಆರ್ಮಿ ಭಾರತ ಏಕತಾ ಮಿಷನ್ ಕೆಲಸ ಮಾಡಲಿದೆ ಎಂದು ಭೀಮ್ ಆರ್ಮಿ ಭಾರತ ಏಕತಾ ಮಿಷನ್ ತಾಲೂಕು ಅಧ್ಯಕ್ಷ ಪ್ರೇಮ್ ಕುಮಾರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭೀಮ್ ಆರ್ಮಿ ಭಾರತ ಏಕತಾ ಮಿಷನ್ ಸಂಘಟನೆ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ. ಹಿಂದೂ, ಮುಸ್ಲಿಂ, ಕ್ರಿಶ್ಚಿಯನ್, ಜೈನ್ ಸೇರಿ ಎಲ್ಲ ಧರ್ಮದವರ ಸಮಸ್ಯೆಗಳಿಗೂ ಸ್ಪಂದಿಸಿ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ. ತಾಲೂಕು ಆಡಳಿತದಿಂದ ಅಂಬೇಡ್ಕರ್ ಜಯಂತಿ ಆಚರಿಸದ ಸಂದರ್ಭ ಪ್ರತಿಭಟನೆ ನಡೆಸಿದ್ದೆವು. ಗೆಂಡೆಹಳ್ಳಿಯಲ್ಲಿ ಅಂಬೇಡ್ಕರ್ ಜಯಂತಿ ಆಚರಿಸಿ ಎಸ್ಎಸ್ ಎಲ್‌ಸಿ, ಪಿಯು ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲಾಯಿತು. ತಾಲೂಕಿನಲ್ಲಿ ಗಾಂಜಾ ಮಾರಾಟ ಹೆಚ್ಚಿದ್ದು, ಇದರಿಂದ ವಿದ್ಯಾರ್ಥಿಗಳ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಇದರ ನಿರ್ಮೂಲನೆಗೆ ಸಂಘಟನೆ ಮುಂದಾಗಲಿದೆ. ಪ್ರವಾಸಿ ತಾಣ ಬೇಲೂರಿನ ಚನ್ನಕೇಶವಸ್ವಾಮಿ ದೇಗುಲದ ಪಾರ್ಕಿಂಗ್ ಆವರಣದ ಹಿಂಭಾಗದಲ್ಲಿ ಡಾ.ಅಂಬೇಡ್ಕರ್ ಹೆಸರಲ್ಲಿ ಹೈಟೆಕ್ ಗ್ರಂಥಾಲಯ ನಿರ್ಮಿಸಿದರೆ ತಾಲೂಕಿನ ಗೌರವ ಹೆಚ್ಚಾಗಲಿದ್ದು, ಪ್ರವಾಸಿಗರಿಗೆ ಅನುಕೂಲವಾಗುತ್ತದೆ ಎಂಬ ಉದ್ದೇಶದಿಂದ ಮನವಿ ಸಲ್ಲಿಸಿದ್ದೇವೆ. ಮತು ಕೆಲ ತಿಂಗಳ ಹಿಂದೆ ಸರ್ಕಾರಿ ಆಸ್ಪತ್ರೆಯಲ್ಲಿನ ಸ್ಕ್ಯಾನಿಂಗ್ ಮಿಷನ್ ಕಳ್ಳತನದ ಬಗ್ಗೆ ತನಿಖೆ ನಡೆಸುವಂತೆ ಪೊಲೀಸರಿಗೆ ಮನವಿ ಮಾಡಿದ್ದೇವೆ. ತಾಲೂಕು ಕಚೇರಿ ಸೇರಿ ವಿವಿಧ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕ ಸಮಸ್ಯೆಗಳಿಗೆ ನ್ಯಾಯಯುತ ಪರಿಹಾರ ದೊರಕಿಸಲು ಸಂಘಟನೆ ಕೆಲಸ ಮಾಡಲಿದ್ದು, ರಾಷ್ಟ್ರೀಯ ಅಧ್ಯಕ್ಷ ಚಂದ್ರಶೇಖರ್ ಆಜಾದ್ ರಾವಣ್ ರವರ ಬಹುಜನ ಹಿತಾಯ ಬಹುಜನ ಸುಖಾಯ ಸಿದ್ಧಾಂತದಡಿ ಭೀಮ್ ಆರ್ಮಿ ಭಾರತ ಏಕತಾ ಮಿಷನ್ ಕೆಲಸ ಮಾಡಲಿದೆ ಎಂದರು.

ಸುದ್ದಿಗೋಷ್ಟಿಯಲ್ಲಿ ಗೌರವಾಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷ ರಮೇಶ್, ಕಾರ್ಯದರ್ಶಿ ಮಹಮದ್ ರಿವೇಜ್, ಕಾರ್ಯಕರ್ತ ರಮೇಶ್ ಇದ್ದರು.

# ಕರೆದಾಗ ಬಾರದಿದ್ದಕ್ಕೆ ಬ್ಯಾಟ್‌ನಿಂದ ಹಲ್ಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಕ್ರಿಕೆಟ್ ಆಟವಾಡುವುದನ್ನು ಮಧ್ಯದಲ್ಲೇ ಬಿಟ್ಟು ಬಾರದೆ ಇದ್ದಿದ್ದಕ್ಕೆ ಯುವಕನ ಮೇಲೆ ಬ್ಯಾಟ್‌ನಿಂದ ಹಲ್ಲೆ ನಡೆಸಿರುವ ಘಟನೆ ನಗರದಲ್ಲಿ ಇತ್ತೀಚೆಗೆ ನಡೆದಿದೆ. ನಗರದ ಮುಜಾವರ ಮೊಹಲ್ಲಾ ನಿವಾಸಿ ಕುಲ್ಸುಂ ಅವರ ಪುತ್ರ ಮೊಹಮ್ಮದ್ ಸುಲ್ತಾನ್ ಗಾಯಾಳು. ನಗರದ ಶಿವಾಲಯ ಎದುರು ಕ್ರಿಕೆಟ್ ಆಡುತ್ತಿದ್ದಾಗ ಅಲ್ಲಿಗೆ ಬಂದ ರುಮಾನ್ ಎಂಬಾತ ಸುಲ್ತಾನ್‌ಗೆ ಬರಲು ಹೇಳಿದ್ದಾನೆ. ಇನ್ನೆರಡು ಬಾಲ್ ಇದೆ ಬರುತ್ತೇನೆ ಸ್ವಲ್ಪ ಇರು ಎಂದು ಹೇಳಿದ್ದಕ್ಕೆ ಆಕ್ರೋಶಗೊಂಡ ರುಮಾನ್ ಕ್ರಿಕೆಟ್ ಬ್ಯಾಟ್‌ನಿಂದ ತಲೆಗೆ ಹೊಡೆಯಲು ಮುಂದಾಗಿದ್ದಾನೆ. ತಕ್ಷಣವೇ ಸುಲ್ತಾನ್ ಅವರು ಕೈ ಅಡ್ಡ ನೀಡಿದ್ದರಿಂದ ಅಪಾಯ ತಪ್ಪಿದೆ. ಗಾಯಾಳುವನ್ನು ನಗರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಕ್ಷುಲ್ಲಕ ವಿಚಾರಕ್ಕೆ ಗಲಾಟೆ ಮಾಡಿಕೊಂಡಿದ್ದಾರೆಂದು ಸಂತ್ರಸ್ತನ ಕುಟುಂಬಸ್ಥರು ಸುಮ್ಮನಿದ್ದರಾದರೂ ಆರೋಪಿ ಆಸ್ಪತ್ರೆಗೆ ಬಂದು ಜೀವ ಬೆದರಿಕೆ ಹಾಕಿದ್ದಾನೆ ಎನ್ನಲಾಗಿದೆ. ಆದ್ದರಿಂದ ಆತನಿಂದ ತಮಗೆ ರಕ್ಷಣೆ ನೀಡಬೇಕು ಹಾಗು ಆತನನ್ನು ಶಿಕ್ಷೆಗೆ ಗುರಿಪಡಿಸಬೇಕೆಂದು ಆಗ್ರಹಿಸಿ ನಗರ ಠಾಣೆಯಲ್ಲಿ ಎಫ್ಐಆರ್ ದಾಖಲಿಸಿದ್ದಾರೆ.

# ಸ್ಕೂಟರ್ ಡಿಕ್ಕಿಯಾಗಿ ಪಾದಚಾರಿ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಸ್ತೆ ದಾಟುತ್ತಿದ್ದಾಗ ವೇಗವಾಗಿ ಬಂದ ಎಲೆಕ್ಟ್ರಿಕ್ ಸ್ಕೂಟರ್ ಡಿಕ್ಕಿಯಾಗಿ ಮಹಿಳೆ ಮೃತಪಟ್ಟಿರುವ ಘಟನೆ ಗಂಡಸಿ-ಹಾಸನ ರಸ್ತೆಯ ಚನ್ನಮ್ಮನಹಳ್ಳಿ ಸಮೀಪ ನಡೆದಿದೆ.

ರಾಮನಗರ ಜಿಲ್ಲೆ ವಿಜಯನಗರ ಬಡಾವಣೆಯ ಶಾಮಲಾ ಮೃತರು. ಚನ್ನಮ್ಮನಹಳ್ಳಿ ಸಮೀಪ ಸಿಮೆಂಟ್ ಇಟ್ಟಿಗೆ ಫ್ಯಾಕ್ಟರಿ ಮಾಡಿಕೊಂಡಿರುವ ಕುಟುಂಬಸ್ಥರು ಕಳೆದ 8 ವರ್ಷಗಳಿಂದ ಇಲ್ಲೇ ವಾಸವಿದ್ದರು.

ಶುಕ್ರವಾರ ಸಂಜೆ ಕೂಲಿಯವರನ್ನು ಮಾತನಾಡಿಸಲೆಂದು ರಸ್ತೆ ದಾಟುತ್ತಿದ್ದಾಗ ಗಂಡಸಿ ಕಡೆಯಿಂದ ವೇಗವಾಗಿ ಬಂದ ಎಲೆಕ್ಟ್ರಿಕ್ ಸ್ಕೂಟರ್ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಮಹಿಳೆ ಸಿಮೆಂಟ್ ರಸ್ತೆಯ ಮೇಲೆ ಬಿದ್ದಿದ್ದರಿಂದ ಹಣೆ, ತಲೆ ಹಾಗೂ ಕೈಗೆ ಏಟಾಗಿದೆ.

ಅಂಬುಲೆನ್ಸ್ ಮೂಲಕ ಹಿಮ್ಸ್‌ಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ದುದ್ದ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹೊಸ ಆರಂಭ ಹೊಸ ಕನಸುಗಳು!

ಬೇಸಿಗೆ ರಜೆಗಳ ಸಿಹಿ ನೆನಪುಗಳನ್ನು ಹೃದಯದಲ್ಲಿ ಹೊತ್ತುಕೊಂಡು ಶಾಲೆಯ ಬಾಗಿಲುಗಳು ಮತ್ತೆ ತೆರೆದುಕೊಳ್ಳುತ್ತಿವೆ. ಶಾಲೆ ಪುನರಾರಂಭ ಎಂದರೆ ಕೇವಲ ತರಗತಿಗಳಿಗೆ ಹಾಜರಾಗುವುದು ಮಾತ್ರವಲ್ಲ; ಅದು ಹೊಸ ಗುರಿಗಳು, ಹೊಸ ನಿರ್ಧಾರಗಳು ಮತ್ತು ಹೊಸ ಕನಸುಗಳ ಆರಂಭವಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಈ ಹೊಸ ಶೈಕ್ಷಣಿಕ ವರ್ಷದ ಮೊದಲ ಹೆಜ್ಜೆಯನ್ನು ಆತ್ಮವಿಶ್ವಾಸದಿಂದ ಇಡಬೇಕು.

ಶಾಲೆಗೆ ಕಾಲಿಟ್ಟ ಕ್ಷಣದಿಂದಲೇ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಆನಾನು ಉತ್ತಮವಾಗಬೇಕು, ನಾನು ಸಾಧಿಸಬೇಕುಟಎಂಬ ದೃಢ ಸಂಕಲ್ಪ ಇರಬೇಕು. ಯಶಸ್ಸು ಒಂದು ದಿನದಲ್ಲಿ ಸಿಗುವುದಿಲ್ಲ. ಅದು ಪ್ರತಿದಿನದ ಪರಿಶ್ರಮ, ಶಿಸ್ತು ಮತ್ತು ಸಕಾರಾತ್ಮಕ ಮನೋಭಾವದಿಂದ ನಿರ್ಮಾಣವಾಗುತ್ತದೆ. ಶಾಲೆ ಎಂದರೆ ಕೇವಲ ಪಾಠಪುಸ್ತಕಗಳ ಜ್ಞಾನ ನೀಡುವ ಸ್ಥಳವಲ್ಲ. ಅದು ವ್ಯಕ್ತಿತ್ವವನ್ನು ರೂಪಿಸುವ ಪವಿತ್ರ ಮಂದಿರವಾಗಿದೆ. ಈ ವರ್ಷ ವಿದ್ಯಾರ್ಥಿಗಳು ಸಮಯದ ಮಹತ್ವವನ್ನು ಅರಿತುಕೊಳ್ಳಬೇಕು. ಶಿಕ್ಷಕರ ಮಾರ್ಗದರ್ಶನವನ್ನು ಗೌರವಿಸಿ, ಪ್ರತಿಯೊಂದು ಪಾಠವನ್ನು ಆಸಕ್ತಿಯಿಂದ ಕಲಿಯಬೇಕು. ಸ್ನೇಹಿತರೊಂದಿಗೆ ಒಳ್ಳೆಯ ಸ್ನೇಹ ಬೆಳೆಸಿ, ಸ್ಪರ್ಧೆಯನ್ನು ಆರೋಗ್ಯಕರವಾಗಿ ಸ್ವೀಕರಿಸಬೇಕು. ವಿಫಲತೆ ಬಂದರೂ ನಿರಾಶರಾಗದೆ, ಅದನ್ನು ಯಶಸ್ಸಿನ ಮೆಟ್ಟಿಲಾಗಿ ಪರಿವರ್ತಿಸಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯ ಹೃದಯದಲ್ಲಿ ಒಂದು ಕನಸು ಅಡಗಿದೆ. ಆ ಕನಸನ್ನು ನನಸು ಮಾಡಲು ಶಾಲೆಯ ಪ್ರತಿದಿನವೂ ಒಂದು ಹೊಸ ಅವಕಾಶವಾಗಿದೆ. ಆದ್ದರಿಂದ ಈ ಹೊಸ ಶೈಕ್ಷಣಿಕ ವರ್ಷವನ್ನು ಉತ್ಸಾಹ, ಶ್ರಮ ಮತ್ತು ಶ್ರದ್ಧೆಯಿಂದ ಸ್ವಾಗತಿಸೋಣ. ಇಂದಿನ ಪರಿಶ್ರಮವೇ ನಾಳೆಯ ಸಾಧನೆಗೆ ದಾರಿ. ಹೊಸ ಶಾಲಾ ವರ್ಷವು ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿ ಬೆಳಕಿನ ಹೊಸ ಅಧ್ಯಾಯವಾಗಲಿ.



**- ಅಂತೋಣಿ ಮುತ್ತು ವಿ.**
**ಶಿಕ್ಷಕರು** 7259675543

# ಇಂಜಿನಿಯರಿಂಗ್ ಸೀಟು ಹಂಚಿಕೆ: ಕಾರ್ಯಾಗಾರ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ನಿರ್ದೇಶನದಂತೆ ಇಂಜಿನಿಯರಿಂಗ್ ಕಾಲೇಜಿನ ಸೀಟುಗಳ ಹಂಚಿಕೆ ಕುರಿತು ಮಂಥನ ಕಾರ್ಯಾಗಾರ ಮೇ 25 ರಿಂದ 30ರ ವರೆಗೆ ನಡೆಯಲಿದ್ದು ವಿದ್ಯಾರ್ಥಿಗಳು ಮತ್ತು ಪೋಷಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಾಂಶುಪಾಲ ಡಾ. ಎಸ್. ಕಂಚೀರಾಯ ಹೇಳಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಾಗಾರವು ಬೆಳಿಗ್ಗೆ 10 ರಿಂದ ಮಧ್ಯಾಹ್ನ 12 ಗಂಟೆವರೆಗೆ ಮತ್ತೆ ಮಧ್ಯಾಹ್ನ 2 ರಿಂದ ಸಂಜೆ 4 ರವರೆಗೆ ನಡೆಯಲಿದೆ. ಕಾಲೇಜಿನಲ್ಲಿ ಲಭ್ಯವಿರುವ ಕೋರ್ಸ್, ಮೆರಿಟ್ ಆಧಾರದ ಮೇಲೆ ಸೀಟು ಪಡೆಯುವ ವಿಧಾನ, ಆನ್‌ಲೈನ್ ಮೂಲಕ ಸೀಟು ಹಂಚಿಕೆ. ಪ್ರಾಧಿಕಾರಕ್ಕೆ ಸಲ್ಲಿಸಬೇಕಾದ ಶುಲ್ಕ ಹೀಗೆ ಹಲವು ಮಾಹಿತಿಗಳನ್ನ ಪೋಷಕರು ಹಾಗೂ ವಿದ್ಯಾರ್ಥಿಗಳು ಪಡೆದುಕೊಳ್ಳಲು ಕಾರ್ಯಾಗಾರದ ಮೂಲಕ ಅನುವು ಮಾಡಿಕೊಡಲಾಗಿದೆ ಎಂದು ವಿವರಿಸಿದರು. ನೂತನವಾಗಿ ಆರಂಭವಾದ ಇಂಜಿನಿಯರಿಂಗ್ ಕಾಲೇಜು ಒಂದು ವರ್ಷ ಯಶಸ್ವಿಯಾಗಿ ಪೂರೈಸಿದ್ದು ಈಗಾಗಲೇ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಹಾಗೂ ಪೋಷಕರ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಸಂತಸ ಹಂಚಿಕೊಂಡರು. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಕಾಲೇಜು ಮತ್ತಷ್ಟು ವಿದ್ಯಾರ್ಥಿಗಳ ಸ್ನೇಹಿ ಆಗುವ ನಿಟ್ಟಿನಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಜತೆಗೆ ಗುಣಮಟ್ಟದ ಬೋಧನೆ ಕಲ್ಪಿಸಿ ಕೊಡುವ ನಿಟ್ಟಿನಲ್ಲಿ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿಗಳು ಶ್ರಮಿಸುತ್ತಿರುವುದಾಗಿ ಹೇಳಿದರು.

# ಸಕಲೇಶಪುರ-ಬಂಟ್ವಾಳ ರೈಲ್ವೆ ಮಾರ್ಗ ಪರಿಶೀಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನೈರುತ್ಯ ರೈಲ್ವೆ ಮುಖ್ಯ ಕಚೇರಿ ಸುರಕ್ಷತಾ ತಂಡದಿಂದ ಮೈಸೂರು ವ್ಯಾಪ್ತಿಯ ಸಕಲೇಶಪುರ-ಬಂಟ್ವಾಳ ವಿಭಾಗದಲ್ಲಿ ಆಂತರಿಕ ಸುರಕ್ಷತಾ ಪರಿಶೀಲನೆ ಮೇ 21 ಹಾಗು 22ರಂದು ನಡೆಯಿತು.

ಪ್ರಧಾನ ಮುಖ್ಯ ಸುರಕ್ಷತಾ ಅಧಿಕಾರಿ ಎಂ. ರಾಮಕೃಷ್ಣ, ಮುಖ್ಯ ಪ್ರಯಾಣಿಕ ಸಾರಿಗೆ ವ್ಯವಸ್ಥಾಪಕ ಇ.ಹರಿಕೃಷ್ಣನ್, ಕಚೇರಿಯ ಇತರೆ ಸುರಕ್ಷತಾ ಅಧಿಕಾರಿಗಳು ಹಾಗೂ ಮೈಸೂರು ವಿಭಾಗದ ಎಲ್ಲಾ ಹಿರಿಯ ಅಧಿಕಾರಿಗಳು ಪರಿಶೀಲನೆಯಲ್ಲಿ ಪಾಲ್ಗೊಂಡಿದ್ದರು.

ಲೆವೆಲ್ ಕ್ರಾಸಿಂಗ್ ಗೇಟ್‌ಗಳು, ಹಳಿ ವಕ್ರತೆ, ಸ್ವಿಚ್ ವಿಸ್ತರಣೆ ಜಾಯಿಂಟ್, ಪ್ರಮುಖ ಮತ್ತು ಸಣ್ಣ ಸೇತುವೆ, ಪಾಯಿಂಟ್ ಮತ್ತು



ಕ್ರಾಸಿಂಗ್, ಸುರಂಗ ಮಾರ್ಗ, ವೈದ್ಯಕೀಯ ಪರಿಹಾರ ವಾಹನ, ವಿದ್ಯುತ್ ಉಪಕರಣ, ಸಿಬ್ಬಂದಿ ಲಾಬಿ, ರನ್ನಿಂಗ್ ರೂಂ, ರಿಲೇ ರೂಂ ಹಾಗೂ ಟ್ರ್ಯಾಕ್ ಯಂತ್ರ ಸಿಬ್ಬಂದಿಯ ಶಿಬಿರ ಕೋಚ್‌ಗಳು ಸೇರಿ ಮಾರ್ಗದ ಮಹತ್ವದ ಸ್ಥಳಗಳಲ್ಲಿ ಪರಿಶೀಲನೆ ನಡೆಸಲಾಯಿತು.

ಹಳಿಗಳ ಸ್ಥಿತಿ, ಯಾರ್ಡ್ ವಿನ್ಯಾಸ, ಬ್ಯಾಟರಿ ಕೊಠಡಿ, ಸಿಗ್ನಲಿಂಗ್ ವ್ಯವಸ್ಥೆ, ನಿಲ್ದಾಣ ಪ್ಯಾನೆಲ್‌ಗಳು, ಟ್ರಾಕ್ಷನ್ ಉಪಕೇಂದ್ರ, ಸೆಕ್ಷನಿಂಗ್ ಮತ್ತು ಪ್ಯಾರಲೆಲಿಂಗ್ ಸೇರಿ ವಿವಿಧ ಸುರಕ್ಷತಾ ಸಂಬಂಧಿತ ವ್ಯವಸ್ಥೆಯನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಯಿತು.

ರೈಲ್ವೆ ನಿಲ್ದಾಣ ಮತ್ತು ವಿಭಾಗದ ವಿವಿಧ ಸ್ಥಳಗಳಲ್ಲಿ ನಿಗದಿತ ಸುರಕ್ಷತಾ ನಿಯಮ ಮತ್ತು ಕಾರ್ಯಾಚರಣಾ ವಿಧಾನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಮತ್ತು ರೈಲ್ವೆ ಕಾರ್ಯಾಚರಣೆಯಲ್ಲಿ ಸುರಕ್ಷತಾ ಮಾನದಂಡಗಳನ್ನು ಮತ್ತಷ್ಟು ಬಲಪಡಿಸಲು ಪರಿಶೀಲನೆ ನಡೆಸಲಾಗುತ್ತದೆಂದು ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕ ಗಿರೀಶ ಧರ್ಮರಾಜ ಕಲಗೊಂಡ ತಿಳಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಮೇ-24

1883: ಬ್ರೂಕ್ಲಿನ್ ಸೇತುವೆ ಸಾರ್ವಜನಿಕ ಬಳಕೆಗೆ ತೆರೆಯಲಾಯಿತು. ಇದು 19ನೇ ಶತಮಾನದ ಮಹತ್ವದ ಇಂಜಿನಿಯರಿಂಗ್ ಸಾಧನೆಗಳಲ್ಲಿ ಒಂದಾಗಿದೆ.

1956: ಯೂರೋವಿಷನ್ ಸಾಂಗ್ ಕಂಟೆಸ್ಟ್ ಮೊದಲ ಬಾರಿಗೆ ಸ್ವಿಟ್ಜರ್ಲ್ಯಾಂಡ್‌ನಲ್ಲಿ ಆಯೋಜಿಸಲಾಯಿತು.

1993: ಎರಿಟ್ರಿಯಾ ದೇಶವು ಇಥಿಯೋಪಿಯಾದಿಂದ ಸ್ವಾತಂತ್ರ್ಯ ಪಡೆದಿತು.

2022: ಅಮೆರಿಕದ ಉವಾಲ್ಡೆ ನಗರದಲ್ಲಿ ಶಾಲೆಯೊಂದರಲ್ಲಿ ನಡೆದ ಗುಂಡಿನ ದಾಳಿಯಲ್ಲಿ 21 ಜನರು ಮೃತಪಟ್ಟರು.

### ಜನನ

1941: ಖ್ಯಾತ ಗಾಯಕ, ಗೀತರಚನೆಕಾರ ಹಾಗೂ ಬಾಬ್ ಡಿಲನ್

1819: ಬ್ರಿಟಿಷ್ ಸಾಮ್ರಾಜ್ಯದ ರಾಣಿ ವಿಕ್ಟೋರಿ

# ಪೌರಾಣಿಕ ನಾಟಕ ನಿರ್ದೇಶಕ ಕೇಶವ ಜಿ.ಜಿ. ಗರೀಘಟ್ಟ

**- ಗೊರೂರು ಅನಂತರಾಜು**

ಕಳೆದ ಭಾನುವಾರ ಅರಕಲಗೂಡಿನಲ್ಲಿ ಶ್ರೀ ವೇಣುಗೋಪಾಲ ಕೃಪಾಪೋಷಿತ ನಾಟಕ ಮಂಡಳಿ ಕಲಾವಿದರು ಹಾರ್ಮೋನಿಯಂ ಮಾಸ್ಟರ್ ಜಿ.ಜಿ. ಕೇಶವ ಗರಿಘಟ್ಟ ಇವರ ನಿರ್ದೇಶನದಲ್ಲಿ ಕುರುಕ್ಷೇತ್ರ ನಾಟಕ ಪ್ರದರ್ಶಿಸಿದರು. ನಾಟಕ ವೀಕ್ಷಿಸಲು ಹೋಗಿದ್ದ ನನಗೆ ಸೂತ್ರಧಾರಿ ಪಾತ್ರಧಾರಿ ಹಾಡಿದ ರಂಗಗೀತೆ ಅದೇ ಪ್ರಥಮ ಬಾರಿ ಕೇಳಿ ಬಹಳ ಇಷ್ಟವಾಯಿತು. ಪ್ರೇಕ್ಷಕರು ಕೂಡ ಸೂತ್ರಧಾರಿ ಹಾಡಿಗೆ ಚಪ್ಪಾಳೆ ಬಾರಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಗೀತೆಯಲ್ಲಿ ಏನೆಲ್ಲಾ ಕನ್ನಡ ಕಲಾ ಸಾರಸ್ವತ ಲೋಕವನ್ನು ತೆರೆದಿಟ್ಟಿದ್ದಾರೆ ಕವಿ ಎಂದರೆ..

ಕನ್ನಡ ನಾಡಿನ ಕಲೆ ಮಕ್ಕಳೇ ಅಳಿಯದೆ ಉಳಿಯಲಿ ನಮ್ಮೀ ಕಲೆ

ಎಲ್ಲೆಲ್ಲೂ ಬೆಳಗಲಿ ನಮ್ಮೀ


ಕಲೆ ಪಂಪ ರನ್ನ ಜನ್ನ ಪೊನ್ನರಾಮಾನುಜ ತೀರ್ಥಂಕರ ಬೇಲೂರು

ಹಳೇಬೀಡು ಕಲೆಗಳ ತವರೂರು

ಸುಬ್ಬಯ್ಯ ನಾಯ್ಡುವಿನ ನಟನಾ ಕಲೆ ನಾಟಕ ರತ್ನ ಗುಬ್ಬಿ ವೀರಣ್ಣ

ನಟಸಾರ್ವಭೌಮ ರಾಜಕುಮಾರ ಅಭಿನವ ಭಾರ್ಗವ ಶಿರೋಮಣಿ ಮಲ್ಲಪ್ಪ ನಟನಾ ಕಲೆ..

ಶ್ರೀ ಕೇಶವರವರು ಸಾಕ್ಷರತಾ ಆಂದೋಲನದಲ್ಲಿ ಕೆಲಸ ಮಾಡಿದ ವಿಚಾರ ಕೂಡ ಶಿಕ್ಷಕರು ಪಿ. ನಂದಕುಮಾರರಿಂದ ತಿಳಿಯಿತು. 1997ರ ಕಾಲಘಟ್ಟದಲ್ಲಿ ನಾನು (ಗೊರೂರು




ಅನಂತರಾಜು) ಸಾಕ್ಷರತಾ ಆಂದೋಲನದಲ್ಲಿ ತೊಡಗಿಸಿಕೊಂಡು ಅಕ್ಷರ ಅಭಿಷೇಕ ನವ ಸಾಕ್ಷರರ ಪತ್ರ ಪುಸ್ತಕ ರಚನಾ ಸಮಿತಿಯ ಕಾರ್ಯದರ್ಶಿಯಾಗಿ ಕೆಲಸ ಮಾಡಿದ್ದೆ. ಈ ಒಂದು ಆಸಕ್ತಿಯಲ್ಲಿ ಕೇಶವರವರಿಗೆ ತಮ್ಮ ಒಂದು ಕಲಾ ಪರಿಚಯವನ್ನು ಬರೆಯಲು ಬಯಸಿ ಸಂಪರ್ಕಿಸಿದೆ. ಅವರು ಹೇಳಿದರು. ಅನಂತರಾಜ್ ಸಾರ್, ನಾನು ನಿಮ್ಮನ್ನು ಬಲ್ಲೆನು. ಆದರೆ ನನ್ನ ಪರಿಚಯ ನಿಮಗಿಲ್ಲ ಅಷ್ಟೇ.

ನಾನು ಕೇಶವ ಜಿ.ಜಿ. ಹುಟ್ಟಿದ ಊರು ಗರೀಘಟ್ಟ. ಇದು ಅರಕಲಗೂಡು ತಾಲೂಕಿಗೆ ಸೇರಿದೆ. ಹಾಸನ ಜಿಲ್ಲೆಯಲ್ಲಿ ಬರುತ್ತದೆ. ನನ್ನ ಜನ್ಮ ದಿನಾಂಕ1979 ಜೂನ್ 4 ನಾನು ಪ್ರಾಥಮಿಕ ಶಿಕ್ಷಣವನ್ನು ಗರೀಘಟ್ಟದಲ್ಲಿ ಹಾಗೂ ಹೊನ್ನವಳ್ಳಿಯ ಹೇಮಾವತಿ ಪ್ರೌಢಶಾಲೆಯಲ್ಲಿ ಹೈಸ್ಕೂಲು ವ್ಯಾಸಂಗ ಮುಗಿಸಿ ಪಿಯುಸಿ ಮತ್ತು ಬಿಎ ಪದವಿ ಸರ್ಕಾರಿ ಕಲಾ ಕಾಲೇಜು ಹಾಸನ ಇಲ್ಲಿ ಮಾಡಿದೆ. ವಿದ್ಯಾಭ್ಯಾಸದ ಜೊತೆಯಲ್ಲಿಯೇ ಸಮಾಜ ಸೇವೆಯಲ್ಲಿ ಪಾಲ್ಗೊಳ್ಳುವಿಕೆ. ರಾಜ್ಯ ಸರ್ಕಾರದ ಸಾಕ್ಷರತಾ ಆಂದೋಲನದಲ್ಲಿ ಸ್ವಯಂ ಸೇವಕನಾಗಿ ಸೇವೆ.

2005-06ನೇ ಸಾಲಿನಲ್ಲಿ ಪ್ರಾರಂಭವಾದ ಸಾಕ್ಷರತಾ ಮುಂದುವರಿಕೆ ಶಿಕ್ಷಣ ಕಾರ್ಯಕ್ರಮದಲ್ಲಿ ಕ್ರಮವಾಗಿ ಪ್ರೇರಕ ಹಾಗೂ ನೋಡಲ್ ಪ್ರೇರಕ, ಜಿಲ್ಲಾ ಸಂಪನ್ಮೂಲ ವ್ಯಕ್ತಿಯಾಗಿ ಸಾಕ್ಷರತಾ ಕಲಾವಿದನಾಗಿ ಸೇವೆ, ಅರಿವು ಕಾರ್ಯಕ್ರಮದಲ್ಲಿ ಬೀದಿ ನಾಟಕ ಹಾಗೂ ಕಲಾಜಾಥಾ ಕಾರ್ಯಕ್ರಮದ ನಿರ್ದೇಶಕನಾಗಿ ಸೇವೆ ಸಲ್ಲಿಕೆ, ರಾಜ್ಯ ಸರ್ಕಾರದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸ್ತ್ರೀ ಶಕ್ತಿ ಗುಂಪುಗಳ ಸದಸ್ಯರಿಗೆ ತರಬೇತಿ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಕೆ, ರಾಜ್ಯ ಹಾಗೂ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ವಿವಿದ ಕಾರ್ಯಕ್ರಮದಲ್ಲಿ ನಿರೂಪಕನಾಗಿ 2014 ರಂಗಭೂಮಿ ಕ್ಷೇತ್ರಕ್ಕೆ ಪ್ರವೇಶ ಮಾಡಿದೆ. ಅರಕಲಗೂಡು ಪಟ್ಟಣದಲ್ಲಿ ತಾಲ್ಲೂಕಿನ ವಿವಿಧ ವಿಕಲಚೇತನರನ್ನೊಳಗೊಂಡ ವಿಕಲಚೇತನರ ಸಂಘವನ್ನು ರಚಿಸಿ ವಿಕಲಚೇತನರಿಂದಲೇ ದಾನಶೂರಕರ್ಣ ನಾಟಕ ಪ್ರದರ್ಶನದಲ್ಲಿ ಕರ್ಣನ ಪಾತ್ರದ ಮೂಲಕ ರಂಗಭೂಮಿಗೆ ಪ್ರವೇಶ ಮಾಡಿದೆ. ಶ್ರೀಕೃಷ್ಣ, ಅರ್ಜುನ, ಧರ್ಮರಾಯ, ಸತ್ಯವ್ರತ, ಭೀಷ್ಮ, ದ್ರೋಣ, ದೃತಾರಾಷ್ಟ್ರ, ನಾರದ, ವಿಧುರ, ಭರತ, ವಿಭಿಷಣ, ವಸಿಷ್ಠ ಮುಂತಾದ ಪಾತ್ರಗಳಲ್ಲಿ ಅಭಿನಯಿಸಿದೆ. ಗುರುಗಳ ಕೈ ನೋಡಿಕೊಂಡು ಹಾರ್ಮೋನಿಯಂ ಕಲಿಕೆ ಪ್ರಾರಂಭಿಸಿದೆ. ಯಾವ ಗುರುಗಳ ಬಳಿಯೂ ಅಭ್ಯಾಸ ಮಾಡದೆ ತರಬೇತಿಯೂ ಇಲ್ಲದೇ ಸ್ವತಃ ಹಾರ್ಮೋನಿಯಂ ನುಡಿಸುವುದನ್ನು ಅಭ್ಯಾಸ ಮಾಡಿಕೊಂಡು ಮೊದಲ ಬಾರಿಗೆ 2023ರಲ್ಲಿ ರಾಜ ವಿಕ್ರಮ ನಾಟಕದ ನಿರ್ದೇಶನ ಮಾಡಿ ಆ ದಿನದಿಂದ ಈವರೆಗೆ ರಾಜಾವಿಕ್ರಮ, ರಾಜ ಸತ್ಯವ್ರತ, ದಾನ ಶೂರಕರ್ಣ, ಕುರುಕ್ಷೇತ್ರ ಹೀಗೆ 12 ನಾಟಕಗಳ ನಿರ್ದೇಶನ ಮಾಡಿರುವೆ. ಹರಿಕಥೆ ಕಲಾವಿದನಾಗಿಯೂ ಸೇವೆ ಸಲ್ಲಿಸುತ್ತಿರುವೆ.

ನನ್ನ ಈ ಸೇವೆ ಗಮನಿಸಿ ಕೆಲವು ಸಂಘ ಸಂಸ್ಥೆಗಳು ರಂಗರತ್ನ, ಹೊಯ್ಸಳರತ್ನ, ಕಲಾಬೀಷ್ಮ, ರಂಗ ಕುಸುಮ, ರಂಗರತ್ನಾಕರ ಹೀಗೆ ಪ್ರಶಸ್ತಿ ನೀಡಿ ಗೌರವಿಸಿರುತ್ತಾರೆ. ಇದುವರೆಗೂ 400ಕ್ಕೂ ಹೆಚ್ಚು ಸ್ವಸಹಾಯ ಸಂಘಗಳನ್ನು ರಚನೆ ಮಾಡಿ ಮಾಹಿತಿ ನೀಡಿ ಮಾರ್ಗದರ್ಶನ ಮಾಡಿರುತ್ತೇನೆ. ಗ್ರಾಮೀಣ ಭಾಗದ ವಿಕಲಚೇತನರಿಗೆ ಗ್ರಾಮ ಮಟ್ಟದಲ್ಲಿ ಸರ್ಕಾರಿ ಸವಲತ್ತುಗಳ ಮಾಹಿತಿ ನೀಡುವ ಸಂಬಂಧ ಗ್ರಾಮ ಪಂಚಾಯಿತಿ ಮಟ್ಟದ ಗ್ರಾಮೀಣ ಪುನರ್ವಸತಿ ಕಾರ್ಯಕರ್ತನಾಗಿ ಸೇವೆ ಸಲ್ಲಿಸಿರುವೆ. ಕಲೆ ಮತ್ತು ಸಂಸ್ಕೃತಿಯನ್ನು ಉಳಿಸುವ ಸಲುವಾಗಿ ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಕಲಾ ಮತ್ತು ಸಾಂಸ್ಕೃತಿಕ ಸಂಘ ಸ್ಥಾಪಿಸಿ ಅ ಮೂಲಕ ರಂಗ ಕಲೆಯನ್ನು ಉಳಿಸುವ ಪೋಷಿಸುವ ಸಲುವಾಗಿ ಸಾಕಷ್ಟು ಕಾರ್ಯಕ್ರಮ ಸಂಘಟಿಸಿರುವೆ ಎಂದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248